ಎರಡನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಃ ನ್ಯಾಯಾಲಯ, ಮದ್ದೂರು

ಸಿಸಿ 1349/2023

| | | |
|---|---|---|
| ಸಾಕ್ಷಿದಾರರ ಹೆಸರು | - ಧರ್ಮಪಾಲ್ ಕೆಸಿ | ಚಾಸಾ-17 |
| ತಂದೆಯ ಹೆಸರು | - ಲೇ ಚೆಲುವಪ್ಪ | ಫ್ರಾಸಾ-7 |
| ವಯಸ್ಸು | - 50 ವರ್ಷ | |
| ಉದ್ಯೋಗ | -ಪಿಎಸ್ ಐ, ಪಾಂಡವಪುರ ಪೋ ಠಾಣೆ | |
| ವಾಸಸ್ಥಳ | - ಪಾಂಡವಪುರ | |

ದಿನಾಂಕಃ- 05-08-2026 ರಂದು ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಅಭಿಯೋಜನೆಯ ಪರಃ ಎಪಿಪಿ ರವರಿಂದಃ-**

ನಾನು 2019 ಆಗಸ್ಟ್ ರಿಂದ 2023 ಅಕ್ಟೋಬರ್ ರವರೆಗೆ ಎಎಸ್ ಐ ಯಾಗಿ ಮದ್ದೂರು ಪೊಲೀಸ್ ಠಾಣೆಯಲ್ಲಿ ಕರ್ತವ್ಯವನ್ನು ನಿರ್ವಹಿಸಿದ್ದೇನೆ.

ದಿನಾಂಕ 15-07-2023 ರಂದು ರಾತ್ರಿ 08.00 ಗಂಟೆ ಸಮಯದಲ್ಲಿ ನಾನು ಠಾಣಾ ಉಸ್ತುವಾರಿಯಲ್ಲಿದ್ದಾಗ ಚಾ.ಸಾ. 1 ರವರು ಠಾಣೆಗೆ ಹಾಜರಾಗಿ ನೀಡಿದ ಗಣಕೀಕೃತ ದೂರನ್ನು ಸ್ವೀಕರಿಸಿಕೊಂಡು ಠಾಣಾ ಮೊಕದ್ದಮೆ ಸಂಖ್ಯೆ 230/2023 ರಂತೆ ಕಲಂಃ 279, 304 ಎ ಐ ಪಿ ಸಿ ರೀತ್ಯಾ ದಾಖಲು ಮಾಡಿಕೊಂಡು, ಪ್ರಥಮ ವರ್ತಮಾನ ವರದಿಯನ್ನು ನ್ಯಾಯಾಲಯಕ್ಕೆ ಮತ್ತು ನಮ್ಮ ಮೇಲಾಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ.

ದಿನಾಂಕಃ 16.07.2023 ರಂದು ನಾನು ಘಟನಾ ಸ್ಥಳಕ್ಕೆ ಭೇಟಿ ನೀಡಿ, ಚಾ.ಸಾ. 2 ರವರ ಸಮಕ್ಷಮದಲ್ಲಿ ಅವರು ತೋರಿಸಿದ ಸ್ಥಳದಲ್ಲಿ ಚಾ.ಸಾ. 9 ಮತ್ತು 10 ರವರ ಸಮಕ್ಷಮ ಬೆಳಿಗ್ಗೆ -10.00 ರಿಂದ 11-00 ಗಂಟೆಯವರೆಗೆ ಮಹಜರ್ ಕ್ರಮ ಜರುಗಿಸಿ ಘಟನಾ ಸ್ಥಳದ ಕಚ್ಚಾ ನಕಾಶೆಯನ್ನು ತಯಾರಿಸಿ ಮತ್ತು ಎರಡು ಛಾಯಾಚಿತ್ರಗಳನ್ನು ತೆಗೆಸಿರುತ್ತೇನೆ. ನಂತರ ಈ ಪ್ರಕರಣದ ಕಡತವನ್ನು ಮುಂದಿನ ತನಿಖೆಗಾಗಿ ಚಾ.ಸಾ. 19 ರವರಿಗೆ ಹಸ್ತಾಂತರಿಸಿರುತ್ತೇನೆ.

ದೂರನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿ.ಪಿ. 1 ಎಂದು ಗುರುತಿಸಲಾಗಿದ್ದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿ.ಪಿ. 1(ಬಿ) ಎಂದು, ಪ್ರ.ವ. ವರದಿಯನ್ನು ನಿ.ಪಿ. 6 ಎಂದು, ಸಾಕ್ಷಿಯ ಸಹಿಯನ್ನು ನಿ.ಪಿ. 6(ಎ) ಎಂದು, ಸ್ಥಳ ಮಹಜರ್ ನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿ.ಪಿ. 3 ಎಂದು ಗುರುತಿಸಲಾಗಿದ್ದು, ಅದರಲ್ಲಿನ ಸಾಕ್ಷಿಯ ಸಹಿಯನ್ನು ನಿ.ಪಿ. 3(ಸಿ) ಎಂದು, ಕಚ್ಚಾ ನಕ್ಷೆಯನ್ನು ನಿಪಿ-7 ಎಂದು, ಸಾಕ್ಷಿಯ ಸಹಿಯನ್ನು ನಿಪಿ-7(ಎ) ಎಂದು, ಸಾಕ್ಷಿಗೆ ಎರಡು ಛಾಯಾಚಿತ್ರಗಳನ್ನು ತೋರಿಸಲಾಗಿ ಅವುಗಳಲ್ಲಿ ತಮ್ಮ ಇರುವಿಕೆಯನ್ನು ನೋಡಿ ಗುರುತಿಸಿದ್ದು ಸದರಿ ಛಾಯಾಚಿತ್ರಗಳನ್ನು ನಿಪಿ-8 ಮತ್ತು 9 ಎಂದು ಗುರುತಿಸಲಾಯಿತು.

**ಪಾಟೀ ಸವಾಲು ಆರೋಪಿ ಪರ ವಕೀಲರುಃ ಶ್ರೀ  ಎಂ ಕೆ ಜೆ     ರವರಿಂದ**

ಚಾಸಾ-1 ರವರು ದೂರು ಕೊಟ್ಟ ತಕ್ಷಣ, ದೂರು ದಾಖಲಿಸುವ ಮುನ್ನ ನಾನು ಘಟನಾ ಸ್ಥಳಕ್ಕೆ ಭೇಟಿ ನೀಡಿರುವುದಿಲ್ಲ. ಆರೋಪಿತನ ನಿಲಕ್ಷತನದಿಂದ ಯಾವುದೇ ಅಪಘಾತ ಆಗದೇ ಹೋದರೂ ಸಹ ಚಾಸಾ-1 ರವರು ನೀಡಿರುವ ಸುಳ್ಳು ದೂರನ್ನು ಸ್ವೀಕರಿಸಿಕೊಂಡು ಸುಳ್ಳು ಪ್ರ ವ ವರದಿಯನ್ನು ದಾಖಲಿಸಿರುತ್ತೇನೆ ಎಂದರೆ ಸರಿಯಲ್ಲ. ಚಾಸಾ-1 ರವರು ದೂರನ್ನು ರಾತ್ರಿ 08-00 ಗಂಟೆಗೆ ನೀಡಿರುತ್ತಾರೆ. ಅಪಘಾತವೂ ಮೃತ ಪುಟ್ಟಸ್ವಾಮಿರವರಿಂದ ಆಗಿರುವ ಕಾರಣ ಅವರು ಯಾವುದೇ ದೂರನ್ನು ತಕ್ಷಣ ನೀಡಿರುವುದಿಲ್ಲ ಎಂದರೆ ಸರಿಯಲ್ಲ. ನಿಪಿ-3 ಮಹಜರ್ ನ್ನು ಈ ಪ್ರಕರಣಕ್ಕೆ ಅನುಕೂಲವಾಗಲೀ ಎಂದು ಸೃಷ್ಟಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಮೃತ ಸಂಬಂಧಿಕರಿಗೆ ಪರಿಹಾರ ಕೊಡಿಸಬೇಕೆಂದು ಹೇಳಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ. ನಿಪಿ-8 ಮತ್ತು 9 ಛಾಯಾಚಿತ್ರಗಳನ್ನು ಈ ಪ್ರಕರಣಕ್ಕಾಗಿ ಸೃಷ್ಟಿ ಮಾಡಿರುವುದು ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಗಿದೆ.)

ಓ ಹೇ ಕೇ ಸರಿಯಾಗಿದೆಂದು ಒಪ್ಪಿರುತ್ತಾರೆ.

ಎರಡನೇ ಅಪರ ಸಿವಿಲ್  ಮತ್ತು ಜೆಎಂಎಫ್,ಸಿ,

ನ್ಯಾಯಾಧೀಶರು, ಮದ್ದೂರು.

ಸಾಕ್ಷಿಯ ಸಹಿಃ